# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

## ಸಿ.ಸಿ. 1915/2019

ಸಾಕ್ಷಿದಾರರ ಹೇಳಿಕೆಃ

| | | | |
|---|---|---|---|
| **ಹೆಸರು** | : ಬಸವರಾಜ | ಚಾಸಾಃ **7** | ಪ್ರಾಸಾಃ **6** |
| **ತಂದೆಯ ಹೆಸರು** | : ಮರುಳಸಿದ್ದಪ್ಪ | | |
| **ವಯಸ್ಸು** | : **62** ವರ್ಷ | | |
| **ವೃತ್ತಿ** | : ವ್ಯವಸಾಯ | | |
| **ವಾಸಸ್ಥಳ** | : ಅರಕೆರೆ ಗ್ರಾಮ | | |

ದಿನಾಂಕಃ **19-11-2025** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದ:-

ಚಾಸಾ-1 ಮತ್ತು 8 ಗೊತ್ತು. ಈಗೇ ಸುಮಾರು 5 ವರ್ಷಗಳ ಹಿಂದೆ ನನ್ನ ವೈಯಕ್ತಿಕ ಕೆಲಸದ ಮೇರೆಗೆ ಹೊನ್ನಾಳಿ ಪೊಲೀಸ್ ಠಾಣೆಗೆ ಹೋದಾಗ ಪೊಲೀಸರ ಕೋರಿಕೆಯ ಮೇರೆಗೆ 5 ದಾಖಲೆಗಳಿಗೆ ಸಹಿಯನ್ನು ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಸ್ಥಳ ಮಹಜರ್ ಕ್ರಮ ಜರುಗಿಸಿ, ಕಚ್ಚ ನಕಾಶೆಯನ್ನು ತಯಾರಿಸಿ, ಯಾವುದೇ ವಾಹನಗಳನ್ನು ಅಮಾನತ್ತು ಪಡಿಸಿಕೊಂಡು ಅಮಾನತ್ತು ಮಹಜರ್ ಕ್ರಮ ಜರುಗಿಸಿರುವುದಿಲ್ಲ. ಸಾಕ್ಷಿಯು ನಿಪಿ-5, 6, 11 ಮತ್ತು 12 ಛಾಯಾಚಿತ್ರಗಳಲ್ಲಿ ತಾನು ಇರುವ ಬಗ್ಗೆ ನೋಡಿ ಗುರುತಿಸಿದ್ದು ಆದರೆ ಯಾವ ವಿಚಾರಕ್ಕೆ ತೆಗೆದಿದ್ದಾರೆ ಎಂಬ ವಿಚಾರ ನನಗೆ ಗೊತ್ತಿಲ್ಲ.

ಸ್ಥಳ ಮಹಜರ್ ಸಮಯದಲ್ಲಿ ಪೊಲೀಸರು ನೀಡಿದ ನೋಟೀಸನ್ನು ನಿಪಿ-30 ಎಂದು, ಸಾಕ್ಷಿಯ ಸಹಿಯನ್ನು ನಿಪಿ-30(ಎ) ಎಂದು, ಅಮಾನತ್ತು ಮಹಜರ್ ಸಮಯದಲ್ಲಿ ಪೊಲೀಸರು ನೀಡಿದ ನೋಟೀಸನ್ನು ನಿಪಿ-31 ಎಂದು, ಸಾಕ್ಷಿಯ ಸಹಿಯನ್ನು ನಿಪಿ-31(ಎ) ಎಂದು ಗುರುತಿಸಲಾಯಿತು.

ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.

<u>ಪಾಟೀ ಸವಾಲು :- ಮಾನ್ಯ ಸ.ಸ.ಅ. ರವರಿಂದ:-</u>

ದಿಃ 28-05-2019 ರಂದು ಪೊಲೀಸರಿಂದ ನಿಪಿ-30 ರಂತೆ ನೋಟೀಸ್ ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಅದೇ ದಿನ ಬೆಳಗ್ಗೆ 10.30 ರಿಂದ 11.30 ಗಂಟೆ ಸಮಯದಲ್ಲಿ ನನ್ನ ಮತ್ತು ಚಾಸಾ-8 ರವರ ಸಮಕ್ಷಮ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ನಿಪಿ-3 ರಂತೆ ಸ್ಥಳ ಮಹಜರ್ ಕ್ರಮ ಜರುಗಿಸಿ , ನಿಪಿ-4 ರಂತೆ ಕಚ್ಚಾ ನಕಾಶೆಯನ್ನು ತಯಾರಿಸಿ, ನಿಪಿ-5 ಮತ್ತು 6 ರಂತೆ ಛಾಯಾಚಿತ್ರಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ಪೊಲೀಸರಿಗೆ ನಿಪಿ-32 ರಂತೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ.

ದಿಃ 29-05-2019 ರಂದು ಪೊಲೀಸರಿಂದ ನಿಪಿ-31 ರಂತೆ ನೋಟೀಸ್ ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಅದೇದಿನ ಪೊಲೀಸರು ನನ್ನ ಮತ್ತು ಚಾಸಾ-8 ಮತ್ತು 1 ರವರ ಸಮಕ್ಷಮ ಹೊನ್ನಾಳಿ ಪೊಲೀಸ್ ಠಾಣೆಯ ಮುಂಭಾಗದಲ್ಲಿ ಕೆಎ-17-ಇವೈ-2153 ಮೋಟಾರ್ ಸೈಕಲ್ ಮತ್ತು ಸ್ಕೂಟಿ ಇಂಜಿನ್ ನಂ.ಒಜಿ-3 ಎಜಿ-2513241 ಮತ್ತು ಚಾಸಿ ನಂ.ಎಂಡಿ626-ಬಿಜಿ-33 ಜಿ 2 ಎ 20921 ಮೋಟಾರ್ ಸೈಕಲ್ ನ್ನು ಅಮಾನತ್ತು ಪಡಿಸಿಕೊಂಡು ಬೆಳಗ್ಗೆ 9.30 ರಿಂದ 10.30 ಗಂಟೆಸ ಮಯದಲ್ಲಿ ನಿಪಿ-10 ರಂತೆ ಅಮಾನತ್ತು ಕ್ರಮ ಜರುಗಿಸಿ , ನಿಪಿ-11 ಮತ್ತು 12 ರಂತೆ ಛಾಯಾಚಿತ್ರಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ಪೊಲೀಸರಿಗೆ ನಿಪಿ-33 ರಂತೆ ಮರುಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ.

ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು :- ಆರೋಪಿತರ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.